# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 573 (561) |
| ಮಾನ್ಯ ಸದಸ್ಯರ ಹೆಸರು | ಶ್ರೀ ಸುನೀಲ್‌ಗೌಡ ಪಾಟೀಲ್<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 20-08-2026 |
| ಉತ್ತರಿಸುವ ಸಚಿವರು | ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಇನ್ನೂ ಹಲವಾರು ಸರ್ಕಾರಿ ನೌಕರರು ತೇರ್ಗಡೆಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| ಆ) | ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು 2026ನೇ ಸಾಲಿನಲ್ಲಿ ಯಾವ ಯಾವ ದಿನಾಂಕಗಳಂದು ಮತ್ತು ಯಾವ ಯಾವ ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಗಿದೆ ಎಂಬ ಮಾಹಿತಿಯನ್ನು ನೀಡುವುದು; (ವಿವರ ನೀಡುವುದು) | ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ನಡೆಸಲು ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| ಇ) | ಸರ್ಕಾರಿ ನೌಕರರಿಗೆ ಸದರಿ ಪರೀಕ್ಷೆಯನ್ನು ಕೈಗೊಳ್ಳುವ ಅಥವಾ ನಡೆಸುವ ದಿನಾಂಕವು ಯಾವ ರೀತಿ ತಿಳಿಯಪಡಿಸಲಾಗುತ್ತದೆ; | ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ (ಸಿಎಲ್‌ಟಿ) ಯ ನೋಂದಣಿ ಪ್ರಕ್ರಿಯೆ ಪ್ರಾರಂಭವಾದಾಗ ಪತ್ರಿಕಾ ಪ್ರಕಟಣೆ ಮೂಲಕ ಜಾಹೀರಾತನ್ನು ಹೊರಡಿಸಲಾಗುತ್ತದೆ. ಸರ್ಕಾರದ ಎಲ್ಲಾ ಇಲಾಖೆಗಳು ಮತ್ತು ಅಧೀನ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ / ನೌಕರರುಗಳಿಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ (ಸಿಎಲ್‌ಟಿ)ಯನ್ನು ತೆಗೆದುಕೊಳ್ಳುವಂತೆ ನಿರ್ದೇಶಿಸಲು ಇ-ಆಡಳಿತ ಕೇಂದ್ರದಿಂದ ಪತ್ರದ ಮೂಲಕ ತಿಳಿಸಲಾಗುತ್ತದೆ.<br><br>ಪರೀಕ್ಷಾ ದಿನಾಂಕಗಳನ್ನು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ(ಸಿಎಲ್‌ಟಿ)ಯ ಅಧಿಕೃತ ಜಾಲತಾಣಗಳಾದ https://clt.karnataka.gov.in ಹಾಗೂ https://nkclt.clt.karnataka.gov.in ನಲ್ಲಿ ಪ್ರದರ್ಶಿಸಲಾಗುತ್ತದೆ. |
| ಈ) | ಇದುವರೆವಿಗೂ ಪರೀಕ್ಷೆ ತೆಗೆದುಕೊಳ್ಳದ ಬಹಳಷ್ಟು ಸರ್ಕಾರಿ ನೌಕರರಿಗೆ ಪರೀಕ್ಷೆ ನಡೆಸುವ ದಿನಾಂಕದ ಬಗ್ಗೆ ಮಾಹಿತಿ ಸಿಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ಸುಮಾರು 1.20 ಲಕ್ಷಕ್ಕೂ ಹೆಚ್ಚು ಸರ್ಕಾರಿ ಹಾಗೂ ನಿಗಮ-ಮಂಡಳಿಗಳ ಅಧಿಕಾರಿ/ನೌಕರರು ಸದರಿ ಪರೀಕ್ಷೆಯನ್ನು ತೆಗೆದುಕೊಳ್ಳದಿರುವುದರಿಂದ ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 9 ಸೇವನೆ 2026, ದಿನಾಂಕ:06-03-2026ರಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷಾ ಅವಧಿಯನ್ನು ಡಿಸೆಂಬರ್-2026ರವರೆಗೆ ವಿಸ್ತರಿಸಲಾಗಿದೆ.<br><br>ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ನಡೆಸಲು ಸೂಕ್ತ ಏಜೆನ್ಸಿಯನ್ನು ಆಯ್ಕೆ |

| | | |
|---|---|---|
| | | ಮಾಡಲು ಕರ್ನಾಟಕ ರಾಜ್ಯ ವಿದ್ಯುನ್ಮಾನ ನಿಗಮ ನಿಯಮಿತ (ಕಿಯೋನಿಕ್ಸ್) ಸಂಸ್ಥೆಯಿಂದ ಟೆಂಡರ್‌ಅನ್ನು ಆಹ್ವಾನಿಸಲಾಗಿದೆ. ಸದರಿ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡ ನಂತರ ಪರೀಕ್ಷೆಯನ್ನು ನಡೆಸಲು ಪರೀಕ್ಷಾ ದಿನಾಂಕಗಳನ್ನು ಅಧಿಕೃತ ಜಾಲತಾಣಗಳಾದ https://clt.karnataka.gov.in ಹಾಗೂ https://nkclt.clt.karnataka.gov.in ನಲ್ಲಿ ಪ್ರದರ್ಶಿಸಲಾಗುತ್ತದೆ |
| ಉ) | ಸದರಿ ಪರೀಕ್ಷೆಯನ್ನು ಇನ್ನು ಮುಂದೆ ಯಾವ ದಿನಾಂಕಗಳಂದು ಮತ್ತು ಯಾವ ಕೇಂದ್ರಗಳಲ್ಲಿ ನಡೆಸಲಾಗುತ್ತದೆ ಹಾಗೂ ಪರೀಕ್ಷಾರ್ಥಿ ಯಾವ ರೀತಿ ನೋಂದಣಿ ಮಾಡಬೇಕು: (ವಿವರ ನೀಡುವುದು) | ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ನಡೆಸಲು ಟೆಂಡರ್ ಕಾರ್ಯವು ಪೂರ್ಣಗೊಂಡ ನಂತರ ಪರೀಕ್ಷಾ ದಿನಾಂಕಗಳನ್ನು ಮತ್ತು ಪರೀಕ್ಷಾ ಕೇಂದ್ರಗಳನ್ನು ಅಧಿಕೃತ ಜಾಲತಾಣಗಳಾದ https://clt.karnataka.gov.in ಹಾಗೂ https://nkclt.clt.karnataka.gov.in ನಲ್ಲಿ ಪ್ರದರ್ಶಿಸಲಾಗುವುದು<br><br>ಸರ್ಕಾರಿ ನೌಕರರು ಪರೀಕ್ಷಾ ನೋಂದಣಿ ವಿಧಾನದ ಮಾಹಿತಿಯು ಅಧಿಕೃತ ಜಾಲತಾಣದಲ್ಲಿ ಲಭ್ಯವಿರುತ್ತದೆ. ಈ ಜಾಲತಾಣದಲ್ಲಿ ಪರೀಕ್ಷಾರ್ಥಿಗಳು ನೋಂದಣಿ ಮಾಡಿಕೊಂಡು, ಪರೀಕ್ಷಾ ಸ್ಲಾಟ್ ಬುಕ್ ಮಾಡಿಕೊಳ್ಳುವುದರ ಮೂಲಕ ಪರೀಕ್ಷೆಯನ್ನು ತೆಗೆದುಕೊಳ್ಳಬಹುದು. |
| ಊ) | ಈ ಸದರಿ ಪರೀಕ್ಷೆಯನ್ನು ನಡೆಸುವ ಹೊಣೆಗಾರಿಕೆಯು ಯಾವ ಸಂಸ್ಥೆಯ ಮೇಲಿದೆ? | ಪರೀಕ್ಷೆಯನ್ನು ನಡೆಸುವ ಹೊಣೆಗಾರಿಕೆ ನೋಡಲ್ ಇಲಾಖೆಯಾದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ಯ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇ-ಆಡಳಿತ ಕೇಂದ್ರಕ್ಕೆ ವಹಿಸಲಾಗಿರುತ್ತದೆ. ಸದರಿ ಪರೀಕ್ಷೆಯನ್ನು ಇ-ಆಡಳಿತ ಕೇಂದ್ರವು ಕರ್ನಾಟಕ ರಾಜ್ಯ ವಿದ್ಯುನ್ಮಾನ ನಿಗಮ ನಿಯಮಿತ (ಕಿಯೋನಿಕ್ಸ್) ಸಂಸ್ಥೆಯ ಸಹಯೋಗದೊಂದಿಗೆ ನಡೆಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಕಡತ ಸಂಖ್ಯೆ: ಸಿಆಸುಇ 129 ಇಪಿಎಂ 2026

(ಪ್ರಿಯಾಂಕ್ ಖರ್ಗೆ)
ಮಾನ್ಯ ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ
ಹಾಗೂ ಇ-ಆಡಳಿತ ಸಚಿವರು